**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 974
ಮಾನ್ಯ ಸದಸ್ಯರ ಹೆಸರು : ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರಕ್ಷೇತ್ರ)
ಉತ್ತರಿಸುವ ದಿನಾಂಕ : 14-03-2025
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಕ್ಕೆ ಸೇರಿದ ಕುಟುಂಬದವರು ಅನ್ಯ ಧರ್ಮಕ್ಕೆ ಮತಾಂತರಗೊಂಡ ನಂತರವೂ (ಬೌದ್ಧಧರ್ಮ ಹೊರತುಪಡಿಸಿ) ತಮ್ಮ ಹಳೆಯ ಜಾತಿಯಲ್ಲಿಯೇ ಸೌಲಭ್ಯಗಳನ್ನು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಇಲ್ಲ. |
| ಆ) | ಬಂದಿದ್ದಲ್ಲಿ, ಎಷ್ಟು ಕುಟುಂಬಗಳು ಮತಾಂತರಗೊಂಡ ನಂತರವೂ ಸೌಲಭ್ಯಗಳನ್ನು ಪಡೆಯುತ್ತಿದ್ದಾರೆ: ಇದರಿಂದ ನೈಜವಾದ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಕುಟುಂಬದವರಿಗೆ ಅನ್ಯಾಯವಾಗುವುದಿಲ್ಲವೇ; | ಅನ್ವಯಿಸುವುದಿಲ್ಲ. |
| ಇ) | ಅನ್ಯಧರ್ಮಕ್ಕೆ ಮತಾಂತರಗೊಂಡ ನಂತರ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಸೌಲಭ್ಯಗಳನ್ನು ಪಡೆಯುತ್ತಿರುವುದು ಸಂವಿಧಾನ ಬಾಹಿರವಲ್ಲವೇ: ಈ ರೀತಿಯಾಗಿ ಪಡೆಯುತ್ತಿರುವ ಕುಟುಂಬಗಳ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; | ಭಾರತ ಸರ್ಕಾರದ ಗೆಜೆಟ್ THE CONSTITUTION (SCHEDULED CASTES) ORDERS 1950 (AMENDMENT ACT) 1990 Dated: 03-06-1990 ರ ಪ್ರಕಾರ ಹಿಂದು, ಬೌದ್ಧ ಮತ್ತು ಸಿಖ್ ಧರ್ಮ ಅನುಸರಿಸುತ್ತಿರುವ ಪರಿಶಿಷ್ಟ ಜಾತಿಯವರಿಗೆ ಮಾತ್ರ ಪರಿಶಿಷ್ಟ ಜಾತಿ ಸೌಲಭ್ಯಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ. ಉಳಿದಂತೆ ಇತರೆ ಧರ್ಮಗಳಿಗೆ ಮತಾಂತರಗೊಂಡಿರುವ ಪರಿಶಿಷ್ಟ ಜಾತಿಯವರು, ಪರಿಶಿಷ್ಟ ಜಾತಿಯವರಿಗೆ ನೀಡಲಾಗುವ ಸಾಂವಿಧಾನಿಕ ಸೌಲಭ್ಯಗಳನ್ನು ಪಡೆಯಲು ಅರ್ಹರಿರುವುದಿಲ್ಲ.<br><br>ಪರಿಶಿಷ್ಟ ಪಂಗಡದವರಿಗೆ ಯಾವುದೇ ಧಾರ್ಮಿಕ ನಿಬಂಧನೆಗಳು ಇರುವುದಿಲ್ಲ. ಆದ್ದರಿಂದ, ಪರಿಶಿಷ್ಟ ಪಂಗಡದವರಿಗೆ ನೀಡಲಾಗುವ ಸಾಂವಿಧಾನಿಕ ಸೌಲಭ್ಯಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ. |

---2

| | | |
|---|---|---|
| ಈ) | ಬಹುತೇಕ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಕುಟುಂಬಗಳು ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರಗೊಂಡು ಪ್ರಾರ್ಥನಾ ಮಂದಿರಗಳಿಗೆ ಹೋಗುತ್ತಿದ್ದು, ಸೌಲಭ್ಯ ಪಡೆಯುವುದಕ್ಕೋಸ್ಕರವಾಗಿಯೇ ಚರ್ಚುಗಳಲ್ಲಿ ನೋಂದಣಿ ಮಾಡಿಸದೇ ಇರುವುದು ನಿಜವೇ ; | ಅಂತಹ ಯಾವುದೇ ಪ್ರಕರಣಗಳು ವರದಿಯಾಗಿರುವುದಿಲ್ಲ. |
| ಉ) | ಈ ಅಂಶಗಳ ಬಗ್ಗೆ ಸರ್ಕಾರವು ಸರ್ವೆ ಕಾರ್ಯಗಳನ್ನು ನಡೆಸಲು ಮತ್ತು ಮತಾಂತರಗೊಂಡ ಕುಟುಂಬಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸೌಲಭ್ಯದಿಂದ ದೂರ ಇಡಲು ಕೈಗೊಂಡಿರುವ ಕ್ರಮಗಳೇನು? | ಸರ್ವೆ ಕಾರ್ಯ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ. |

ಸಕಇ 247ಎಸ್‌ಎಲ್‌ಪಿ 2025

(ಡಾ: ಹೆಚ್.ಸಿ.ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು